ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 ದಿನಾಂಕ: 08–11–2019

# ಪತ್ರಿಕಾ ಪ್ರಕಟಣೆ

## ನವೆಂಬರ್ 14 ವೃತ್ತಿ ತರಬೇತಿ ಮೇಳ

ಬೆಂಗಳೂರು, ನವೆಂಬರ್ 8 (ಕರ್ನಾಟಕ ವಾರ್ತೆ) :

ಸರ್ಕಾರಿ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ. ಬೆಂಗಳೂರು–29, ಕ್ವೆಸ್ಟ್ ಅಲಿಯನ್ಸ್, ಮತ್ತು ಯೆಸ್ ಕಂಪನಿಗಳ ಸಹಯೋಗದೊಂದಿಗೆ ಸರ್ಕಾರಿ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ, ಹೊಸೂರು ರಸ್ತೆ, ಬೆಂ–29 ಇಲ್ಲಿ ಅಪೆರೆಂಟಿಶಿಪ್ ತರಬೇತಿ ಮೇಳವನ್ನು ನವೆಂಬರ್ 14ರಂದು ಆಯೋಜಿಸಲಾಗಿದ್ದು, ಬೆಂಗಳೂರು ನಗರ ಜಿಲ್ಲೆಯ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳಲ್ಲಿ ತರಬೇತಿ ಪಡೆದು ಉತ್ತೀರ್ಣರಾಗಿರುವ ಮತ್ತು ಫಲಿತಾಂಶವನ್ನು ನಿರೀಕ್ಷಿಸುತ್ತಿರುವ ಅಭ್ಯರ್ಥಿಗಳ ಈ ತರಬೇತಿ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಪ್ರಾಚಾರ್ಯರು, ಸರ್ಕಾರಿ ಮಾದರಿ ಕೈಗಾರಿಕಾ ತರಬೇತಿ ಸಂಸ್ಥೆ, ಬೆಂ–29 ರವರನ್ನು ಕಛೇರಿ ವೇಳೆಯಲ್ಲಿ, ದೂರವಾಣಿ ಸಂಖ್ಯೆ: 080–26562307 ಅಥವಾ ಖುದ್ದಾಗಿ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 8 (ಕರ್ನಾಟಕ ವಾರ್ತೆ) :

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕಾರ್ಮಿಕ ಮತ್ತು ಸಕಾಲ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್ ಅವರು ನವೆಂಬರ್ 9 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸಕ್ಕೈಗೊಂಡು ಅಂದೇ ರಾತ್ರಿ ಬೆಂಗಳೂರಿಗೆ ಹಿಂತಿರುಗುವರು.

## ಉಪ ಚುನಾವಣೆ – ನಿಯಂತ್ರಣ ಕೊಠಡಿ ಸ್ಥಾಪನೆ

ಬೆಂಗಳೂರು, ನವೆಂಬರ್ 8 (ಕರ್ನಾಟಕ ವಾರ್ತೆ)

ಡಿಸೆಂಬರ್ 5 ರಂದು ಮಹಾಲಕ್ಷ್ಮೀ ಲೇಔಟ್ ವಿಧಾನಸಭಾ ಕ್ಷೇತ್ರ ಉಪ ಚುನಾವಣೆ ನಡೆಯುವ ಹಿನ್ನಲೆಯಲ್ಲಿ ಈ ಕಚೇರಿಯಲ್ಲಿ ಚುನಾವಣೆ ಮುಕ್ತಾಯವಾಗುವವರೆಗೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವಂತೆ ಅಬಕಾರಿ ಇಲಾಖೆಯ ನಿಯಂತ್ರಣಾ ಕೊಠಡಿಯನ್ನು ತೆರೆದಿದೆ.

ಸಾರ್ವಜನಿಕರು ಸಂಭವನೀಯ ಅಬಕಾರಿ ಅಕ್ರಮಗಳ ಬಗ್ಗೆ ಮಾಹಿತಿ/ದೂರನ್ನು ಅಬಕಾರಿ ಉಪ ಆಯುಕ್ತರ ಕಚೇರಿ, ಬೆಂಗಜಳೂರು ನಗರ ಜಿಲ್ಲೆ, (ಉತ್ತರ) ನಂ 26/4ಬಿ, 3ನೇ ಮಹಡಿ, ಇಂಡಸ್ಟ್ರಿಯಲ್ ಸಬರ್ಬ್ ಸೋಪ್ ಫ್ಯಾಕ್ಟರಿ ಮೆಟ್ರೋ ಸ್ಟೇಷನ್ ಪಕ್ಕ, ವೆಸ್ಟ್ ಆಫ್ ಕಾರ್ಡ್ ರಸ್ತೆ, 2 ನೇ ಹಂತ, ರಾಜಾಜಿನಗರ, ಬೆಂಗಳೂರು ಇಲ್ಲಿ ಚುನಾವಣೆ ಮುಕ್ತಾಯವಾಗುವವರೆಗೂ ಸ್ಥಿರ ದೂರವಾಣಿ ಸಂಖ್ಯೆ: 080 2337 0003 ಗೆ ಸಲ್ಲಿಸಬಹುದಾಗಿದೆ. ಎಂದು ಅಬಕಾರಿ ಉಪ ಆಯುಕ್ತರ ಕಚೇರಿ, ಬೆಂಗಳೂರು ನಗರ ಜಿಲ್ಲೆ (ಉತ್ತರ) ಯವರ ಪ್ರಕಟಣೆ ತಿಳಿಸಿದೆ.

## ನವೆಂಬರ್ 15 ಮತ್ತು 16 ರಂದು ಅಂತಾರಾಷ್ಟ್ರೀಯ ಯೋಗ ಸಮ್ಮೇಳನ

ಬೆಂಗಳೂರು, ನವೆಂಬರ್ 8 (ಕರ್ನಾಟಕ ವಾರ್ತೆ)

ಆಯುಷ್ ಮಂತ್ರಾಲಯ ಭಾರತ ಸರ್ಕಾರ ಇವರ ವತಿಯಿಂದ ಯೋಗವೈದ್ಯ ಪದ್ಧತಿಯನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಜನಪಿಯಗೊಳಿಸುವ ಸಲುವಾಗಿ ಕಳೆದ ಐದು ವರ್ಷಗಳಿಂದ "ಅಂತರರಾಷ್ಟ್ರೀಯ ಯೋಗ ದಿನ" ವನ್ನು ಆಚರಿಸುತ್ತಾ ಬಂದಿದೆ.

ಅದೇ ನಿಟ್ಟಿನಲ್ಲಿ ಹೃದಯದ ಆರೋಗ್ಯವನ್ನು ಕಾಪಾಡುವಲ್ಲಿ ಯೋಗಾಭ್ಯಾಸದಿಂದಾಗುವ ಪ್ರಯೋಜನದ ಕುರಿತು ಅಂತರಾಷ್ಟ್ರೀಯ ಮಟ್ಟದಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ನವೆಂಬರ್ 15 ಮತ್ತು 16 ರಂದು ಮೈಸೂರು ನಗರದಲ್ಲಿ "ಹೃದಯದ ಆರೈಕೆಗಾಗಿ ಯೋಗ" ಅಂತರಾಷ್ಟ್ರೀಯ ಸಮ್ಮೇಳನವನ್ನು (International Conference on Heart Care) ಆಯೋಜಿಸಿದೆ.

ಈ ಸಮ್ಮೇಳನದಲ್ಲಿ ದೇಶ ವಿದೇಶಗಳ ಯೋಗ ಪರಿಣತರು, ವಿವಿಧ ವೈದ್ಯಕೀಯ ಪದ್ಧತಿಗಳ ಸುಮಾರು 800 ಕ್ಕೂ ಅಧಿಕ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಎರಡು ದಿನಗಳ ಕಾಲ ಹೃದಯದ ಆರೈಕೆಯಲ್ಲಿ ಯೋಗದ ಕುರಿತು ಪ್ರಬಂಧ ಮಂಡನೆ, ಚರ್ಚೆ, ವಿವಿಧ ವೈಜ್ಞಾನಿಕ ಅಧಿವೇಶನಗಳು (Scientific Session) ಭಿತ್ತಿಪತ್ರ ಪ್ರದರ್ಶನ ಇತ್ಯಾದಿ ಚಟುವಟಿಕೆಗಳು ನಡೆಯಲಿದೆ ಎಂದು ಆಯುಷ್ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ನವೆಂಬರ್ 8 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 10-11-2019 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಐಶ್ವರ್ಯ ತೋಲ್ಪಾಡಿ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**